ಶ್ರೀ ಹೆಚ್.ಡಿ.ರೇವಣ್ಣ : ಸರ್, ನನ್ನದೊಂದು ನಿಳುವಳಿ ಸೂಚನೆ ಇದೆ.

ಶ್ರೀ ಡಿ.ಎನ್.ಜೀವರಾಜ್ : ರೇವಣ್ಣನವರು ನಿಳುವಳಿ ಸೂಚನೆ ತೆಗೆದುಕೊಳ್ಳಿ, ನನ್ನದೊಂದು ಸಣ್ಣ ವಿಷಯವಿದೆ.

ಶ್ರೀ ಹೆಚ್.ಡಿ.ರೇವಣ್ಣ : ನಿಯಾಮಾವಳಿ ಪ್ರಕಾರ ಹೋಗೋಣ.

1. ಪ್ರಕಟಣೆ

ಅಧ್ಯಕ್ಷರು : ಒಂದು ಪ್ರಕಟಣೆ ಇದೆ, ಮಾನ್ಯ ಸದಸ್ಯರುಗಳೆ, ದಿನಾಂಕ: 6.6.2013ರಂದು ನಡೆದ ಕಾರ್ಯಕಲಾಪಗಳ ಸಲಹಾ ಸಮಿತಿ ಸಭೆಯಲ್ಲಿ ಈ ಕೆಳಕಂಡ ತೀರ್ಮಾನಗಳನ್ನು ಕೈಗೊಳ್ಳಲಾಯಿತೆಂದು ಈ ಮೂಲಕ ಸದನದ ಗಮನಕ್ಕೆ ತರಬಯಸುತ್ತೇನೆ. ದಿನಾಂಕ: 10.6.2013 ಮತ್ತು 11.6.2013ರಂದು ರಾಜ್ಯಪಾಲರ ಭಾಷಣದ ಮೇಲಿನ ವಂದನಾ ನಿರ್ಣಯದ ಮೇಲಿನ ಚರ್ಚೆ ಮತ್ತು ದಿನಾಂಕ 12.6.2013 ಬೆಳಿಗ್ಗೆ ಸನ್ಮಾನ್ಯ ಮುಖ್ಯಮಂತ್ರಿಗಳು ವಂದನಾ ನಿರ್ಣಯದ ಮೇಲಿನ ಚರ್ಚೆಗೆ ಉತ್ತರಿಸುವರು.

2. ಸಭೆಯ ಮುಂದಿಡಲಾಗುವ ಕಾಗದ ಪತ್ರಗಳು

ಕಾರ್ಯದರ್ಶಿಯವರು : ಅ) 13ನೇ ವಿಧಾನಸಭೆ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಸಮಿತಿಯ 25ನೇ ವರದಿಯನ್ನು ಸಭೆಯ ಮುಂದಿಡುತ್ತೇನೆ.

ಆ) 13ನೇ ವಿಧಾನಸಭೆಯ ಹಕ್ಕುಬಾಧ್ಯತಾ ಸಮಿತಿಯ 6ನೇ ವರದಿಯನ್ನು ಸಭೆಯ ಮುಂದಿಡುತ್ತೇನೆ.

ಇ) ಲೋಕೋಪಯೋಗಿ ಇಲಾಖೆಯಿಂದ ಕಾಮಗಾರಿಗಳಿಗಾಗಿ ಟೆಂಡರ್ ಕರೆಯುವಲ್ಲಿ ನಿಯಮಗಳ ಉಲ್ಲಂಘನೆಯಾಗಿರುವ ಬಗ್ಗೆ ವಿಚಾರಣೆ ನಡೆಸಿ ವರದಿಯನ್ನು ಸಲ್ಲಿಸಲು 13ನೇ ವಿಧಾನಸಭೆಯಲ್ಲಿ ರಚಿಸಲಾಗಿದ್ದ ಸದನ ಸಮಿತಿಯ ವರದಿಯನ್ನು ಸಭೆಯ ಮುಂದಿಡುತ್ತೇನೆ.

ಈ) ರಾಜ್ಯದಲ್ಲಿರುವ ಹಾಗೂ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ಬರುವ ಕ್ಲಬ್‌ಗಳ ಕಾರ್ಯವೈಖರಿಯ ಬಗ್ಗೆ ಪರಿಶೀಲಿಸಿ ವರದಿಯನ್ನು ಸಲ್ಲಿಸಲು ರಚಿಸಲಾಗಿದ್ದ 13ನೇ ವಿಧಾನಸಭೆಯ ಸದನ ಸಮಿತಿಯ ಮಧ್ಯಂತರ ವರದಿಯನ್ನು ಸಭೆಯ ಮುಂದಿಡುತ್ತೇನೆ.

ಅಧ್ಯಕ್ಷರು : ಮಂಡಿಸಲಾಯಿತು.